# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1116 |
| ಸದಸ್ಯರ ಹೆಸರು | : ಡಾ|| ಯತೀಂದ್ರ. ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 18-12-2024. |
| ಉತ್ತರಿಸುವ ಸಚಿವರು | : ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ವಿವಿಧ ಸಾಲ ಸೌಲಭ್ಯಗಳ ಯೋಜನೆಗಳಾವುವು; ಈ ರೀತಿಯ ಸಾಲ ಸೌಲಭ್ಯಗಳ ಯೋಜನೆಗಳಿಂದ ಯಾವ ಬಗೆಯ ಫಲಾನುಭವಿಗಳಿಗೆ ಅನುಕೂಲವಾಗುತ್ತಿದೆ; (ವಿವರ ನೀಡುವುದು) | ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿಗೆ ಒದಗಿಸುತ್ತಿರುವ ವಿವಿಧ ಸಾಲ ಸೌಲಭ್ಯ ಯೋಜನೆಗಳ ವಿವರ ಹಾಗೂ ಈ ರೀತಿಯ ಸಾಲ ಸೌಲಭ್ಯಗಳ ಯೋಜನೆಗಳಿಂದ ಅನುಕೂಲವಾಗುವ ಫಲಾನುಭವಿಗಳ ವಿವರವನ್ನು ಅನುಬಂಧ - '1' ರಲ್ಲಿ ನೀಡಲಾಗಿದೆ. |
| ಆ) | ವಿವಿಧ ಸಾಲ ಯೋಜನೆಗಳ ಕೆಲವು ಷರತ್ತುಗಳು ಕ್ಲಿಷ್ಟಕರ ಮತ್ತು ಅಸಮಂಜಸವಾಗಿದ್ದು, ಇವುಗಳಿಂದ ಫಲಾನುಭವಿಗಳಿಗೆ ಸಾಲ ಯೋಜನೆಗಳ ಪ್ರಯೋಜನ ಪಡೆಯಲು ಕಷ್ಟಸಾಧ್ಯವಾಗುತ್ತಿರುವುದರಿಂದ ಷರತ್ತುಗಳ ಸರಳೀಕರಣದ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | 2023-24ನೇ ಸಾಲಿನಲ್ಲಿ ಹೊಸ ಸರ್ಕಾರವು ಅಸ್ತಿತ್ವಕ್ಕೆ ಬಂದ ನಂತರ ನಿಗಮದ ವಿವಿಧ ಯೋಜನೆಗಳ ಮಾರ್ಗಸೂಚಿಗಳನ್ನು ಸಡಿಲಗೊಳಿಸಿ ಫಲಾನುಭವಿಗಳಿಗೆ ಸುಲಭವಾಗಿ ಸಾಲ ಸಹಾಯಧನ ಪ್ರಯೋಜನ ಪಡೆಯಲು ಕ್ರಮವಹಿಸಲಾಗಿದೆ.<br>ಪರಿಷ್ಕೃತ ಮಾರ್ಗಸೂಚಿಗಳನ್ನು ಅನುಬಂಧ- '2' ರಲ್ಲಿ ನೀಡಲಾಗಿದೆ. |
| ಇ) | ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ನೀಡುವ ಗಂಗಾ ಕಲ್ಯಾಣ ಯೋಜನೆ ಕೆಲವೇ ಕೆಲವು ಅಲ್ಪಸಂಖ್ಯಾತರಿಗೆ ತಲುಪುತ್ತಿದ್ದು, ಸದರಿ ಯೋಜನೆ ಎಲ್ಲರಿಗೂ ದೊರಕುವಂತಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ನಿಗಮಕ್ಕೆ ಕಾಲಕಾಲಕ್ಕೆ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನಕ್ಕೆ ಅನುಗುಣವಾಗಿ ಗಂಗಾ ಕಲ್ಯಾಣ ಯೋಜನೆಯಡಿ ಅನುದಾನವನ್ನು ಕಾಯ್ದಿರಿಸಿ ಭೌತಿಕ ಗುರಿಗಳನ್ನು ನಿಗದಿಪಡಿಸಲಾಗುತ್ತದೆ.<br><br>ಮುಂದುವರೆದು, ಗಂಗಾ ಕಲ್ಯಾಣ ಯೋಜನೆಯ ಸೌಲಭ್ಯವನ್ನು ಇನ್ನೂ ಹೆಚ್ಚು ಅಲ್ಪಸಂಖ್ಯಾತರಿಗೆ ದೊರಕಿಸುವ ದೃಷ್ಟಿಯಿಂದ 2025-26 ನೇ ಸಾಲಿನ ಆಯವ್ಯಯದಲ್ಲಿ ಹೆಚ್ಚಿನ ಅನುದಾನವನ್ನು ಕೋರಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ:MWD 269 LMQ 2024

B. Zameer

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.

ಅನುಬಂಧ-1

**ವಿಧಾನ ಸಭೆಯ ಸದಸ್ಯರಾದ ಶ್ರೀ. ಡಾ. ಯತೀಂದ್ರ ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕಿಗುರುತ್ತಿಲದ ಪ್ರಶ್ನೆ ಸಂಖ್ಯೆ: 999 (1116) ಕ್ಕೆ ಉತ್ತರ ಅನುಬಂಧ - "ಅ"**

## 2024-25 ನೇ ಸಾಲಿನ ಯೋಜನೆಗಳು

### 1. ಅರಿವು(ವಿಧ್ಯಾಭ್ಯಾಸ ಸಾಲ) ಯೋಜನೆ

ಈ ಯೋಜನೆಯಡಿಯಲ್ಲಿ ವೃತ್ತಿಪರ ಶಿಕ್ಷಣ ಅಂದರೆ MBBS, MD, MS, BE, B. Tech, M.E, M.Tech, BDS, MDS, B.Ayush, M.Ayush, MBA, MCA, LLB, B.Arch, M.Arch ಕೋರ್ಸ್ ಮಾಡಬಯಸುವ ಅಲ್ಪಸಂಖ್ಯಾತ ವಿಧ್ಯಾರ್ಥಿಗಳಿಗೆ ಅವರು ವ್ಯಾಸಂಗ ಪೂರ್ಣಗೊಳಿಸುವವರಿಗೆ ಪ್ರತಿ ವರ್ಷಕ್ಕೆ ರೂ.50,000/-ದಿಂದ ರೂ.5,00,000/- ವರೆಗೆ ಸಾಲವನ್ನು ಮಂಜೂರು ಮಾಡಲಾಗುತ್ತದೆ.ವ್ಯಾಸಂಗ ಪೂರ್ಣಗೊಳಿಸಿದ 6 ತಿಂಗಳ ನಂತರ ಅಂತಹ ವಿಧ್ಯಾರ್ಥಿಯು ಶೇ.2ರ ಸೇವಾಶುಲ್ಕದೊಂದಿಗೆ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ. ಈ ಯೋಜನೆಯಡಿ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯಮಿತಿ ರೂ.8.00 ಲಕ್ಷಗಳು ಮೀರಿರಬಾರದು.

### 2. ಸ್ವಾವಲಂಬಿ ಸಾರಥಿ ಯೋಜನೆ (ಟ್ಯಾಕ್ಸಿ /ಗೂಡ್ಸ್ /ಪ್ಯಾಸೆಂಜರ್ ಆಟೋರಿಕ್ಷಾ ವಾಹನ ಖರೀದಿಸಲು ಸಹಾಯಧನ ಯೋಜನೆ)

ಈ ಯೋಜನೆಯನ್ನು ನಿಗಮದ ವತಿಯಿಂದ ರಾಷ್ಟ್ರೀಕೃತ/ಷೆಡ್ಯೂಲ್ ಬ್ಯಾಂಕ್‌ಗಳ ಆರ್.ಬಿ.ಐ ನಿಂದ ಮಾನ್ಯತೆ ಪಡೆದ ವಿವಿಧ ಫೈನಾನ್ಸ್ ಸಂಸ್ಥೆಗಳು (ಫೈನಾನ್ಸ್ ಕಂಪನೀಸ್ /ಕೊ-ಆಪರೇಟೀವ್ ಬ್ಯಾಂಕ್ / ಸೊಸೈಟೀಸ್) ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತದೆ. ರಾಷ್ಟ್ರೀಕೃತ ಬ್ಯಾಂಕುಗಳು/ಷೆಡ್ಯೈಲ್ ಬ್ಯಾಂಕ್ ಆರ್.ಬಿ.ಐ ನಿಂದ ಮಾನ್ಯತೆ ಪಡೆದ ವಿವಿಧ ಫೈನಾನ್ಸ್ ಸಂಸ್ಥೆಗಳು (finance companies) co-operative bank/societies ಸಾಲ ಮಂಜೂರಾತಿ ನೀಡಿದ ಫಲಾನುಭವಿಗಳಿಗೆ ಪ್ಯಾಸೆಂಜರ್ ಆಟೋರಿಕ್ಷಾ/ಗೂಡ್ಸ್ ವಾಹನ/ಟ್ಯಾಕ್ಸಿ ಖರೀದಿಸಲು ವಾಹನದ on road price ಮೇಲೆ ಕನಿಷ್ಠ ಶೇ.50 ರಷ್ಟು ಸಹಾಯಧನ ಗರಿಷ್ಠ ರೂ.3.00 ಲಕ್ಷ ( ಪ್ಯಾಸೆಂಜರ್ ಆಟೋರಿಕ್ಷಾಗೆ ಗರಿಷ್ಠರೂ.75000/)) ಸಹಾಯಧನವನ್ನು ನೀಡಲಾಗುವುದು.

## 3. ಶ್ರಮಶಕ್ತಿ ಯೋಜನೆ:

ಈ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತ ವರ್ಗದ ಕುಲಕಸುಬುದಾರರಿಗೆ ತರಬೇತಿ ನೀಡಿ, ಅವರು ತಮ್ಮ ಕಲಾತ್ಮಕ ಮತ್ತು ತಾಂತ್ರಿಕ ಕೌಶಲ್ಯವನ್ನು ವೃದ್ಧಿಸಿಕೊಂಡು ಅದೇ ಕಸುಬನ್ನು ಮುಂದುವರೆಸಲು ಅಥವಾ ಸಣ್ಣ ವ್ಯಾಪಾರವನ್ನು ಪ್ರಾರಂಭಿಸಲು ಅಥವಾ ಅಭಿವೃದ್ಧಿಗೊಳಿಸುವ ಸಲುವಾಗಿ, ನಿಗಮದಿಂದ ಕಡಿಮೆ ಬಡ್ಡಿದರದಲ್ಲಿ ರೂ.50,000/- ಸಾಲಸೌಲಭ್ಯವನ್ನು ಕಲ್ಪಿಸಲಾಗುತ್ತದೆ. ಇದರಲ್ಲಿ ಶೇ.50 ರಷ್ಟು ಸಾಲವನ್ನು ಮತ್ತು ಶೇ.50 ರಷ್ಟು ಸಹಾಯಧನವಾಗಿರುತ್ತದೆ.

## 4. ಶ್ರಮಶಕ್ತಿ ವಿಶೇಷ ಮಹಿಳಾ ಯೋಜನೆ

ಅಲ್ಪಸಂಖ್ಯಾತ ಸಮುದಾಯದ ವಿಧವೆ/ವಿಚ್ಛೇದಿತ/ಅವಿವಾಹಿತ ಮಹಿಳೆಯರಿಗೆ ಆರ್ಥಿಕ ಸಬಲೀಕರಣಕ್ಕಾಗಿ ವಿಶೇಷ ಯೋಜನೆಯಾಗಿದೆ.ಯೋಜನೆಯಡಿ ರೂ.25,000/-ಸಾಲ ಮತ್ತು ರೂ.25,000/- ಸಹಾಯಧನ ಸೇರಿ ಕನಿಷ್ಠ ಒಟ್ಟು ರೂ.50,000/- ಕಡಿಮೆ ಇಲ್ಲದಂತೆ ಸಾಲ ಮತ್ತು ಸಹಾಯಧನವನ್ನು ವಿವಿಧ ಆರ್ಥಿಕ ಚಟುವಟಿಕೆಗಳನ್ನು ಕೈಗೆತ್ತಿಕೊಳ್ಳಲು ಒದಗಿಸಲಾಗುವುದು. ಪ್ರತಿ ಫಲಾನುಭವಿಗೆ ರೂ.50,000/- ಸಾಲ ಮತ್ತು ಸಹಾಯಧನ ಮೊತ್ತ ನಿಗದಿಪಡಿಸಲಾಗಿದ್ದು ಯಾವುದೇ ಕಾರಣಕ್ಕೂ ಸಾಲ ಮತ್ತು ಸಹಾಯಧನ ಮೊತ್ತವನ್ನು ನಿಗದಿಪಡಿಸಿರುವ ಮೊತ್ತಕ್ಕಿಂತ ಕಡಿಮೆ ಮಾಡಬಾರದು.

## 5.ವೃತ್ತಿ ಪ್ರೋತ್ಸಾಹ ಯೋಜನೆ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಈ ಹಿಂದೆ ಅನುಷ್ಠಾನಗೊಳ್ಳುತ್ತಿದ್ದ ವೃತ್ತಿ ಪ್ರೋತ್ಸಾಹ ಮತ್ತು ಸ್ವಯಂ ಉದ್ಯೋಗ ಯೋಜನೆಗಳೆರಡನ್ನು ವಿಲೀನಗೊಳಿಸಿ "ವೃತ್ತಿ ಪ್ರೋತ್ಸಾಹ ಯೋಜನೆ" ಎಂದು 2020-21 ನೇ ಸಾಲಿಗೆ ಅನ್ವಯವಾಗುವಂತೆ ಬ್ಯಾಂಕ್ ಸಾಲದ ಬದಲಾಗಿ ಕೆ.ಎಂ.ಡಿ.ಸಿ ನಿಗಮದ ವತಿಯಿಂದಲೇ ಒಟ್ಟು ಸಾಲದ ಮೊತ್ತ ರೂ.1.00 ಲಕ್ಷ (ಒಂದು ಲಕ್ಷ ರೂಪಾಯಿಗಳು) ಅದರಲ್ಲಿ ಶೇ.50ರಷ್ಟು ಸಾಲ, ಶೇ.50 ರಷ್ಟು ಸಹಾಯಧನ ದೊಂದಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.

## 6. ಗಂಗಾ ಕಲ್ಯಾಣ ಯೋಜನೆ:

ಗ್ರಾಮೀಣ ಪ್ರದೇಶದಲ್ಲಿ ವಾಸಿಸುವ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಸಣ್ಣ ಹಾಗೂ ಅತೀ ಸಣ್ಣ ರೈತರಿಗೆ ಕೊಳವೆಬಾವಿಯನ್ನು ಕೊರೆದು,ಪಂಪ್ ಮೋಟಾರ್ ಹಾಗೂ ವಿದ್ಯುದೀಕರಣ ಮಾಡಿ ನೀರನ್ನು ಒದಗಿಸಲಾಗುತ್ತದೆ. ಈ ಯೋಜನೆಯು ಸಂಪೂರ್ಣ ಸಹಾಯಧನ ಯೋಜನೆಯಾಗಿದೆ. ವೈಯಕ್ತಿಕ ಕೊಳವೆ ಬಾವಿ ಯೋಜನೆಗೆ ಸರ್ಕಾರವು ರೂ.4.00ಲಕ್ಷಗಳನ್ನು 1.ಬೆಂಗಳೂರುಗ್ರಾಮಾಂತರ 2.ಕೋಲಾರ, 3.ಚಿಕ್ಕಬಳ್ಳಾಪುರ, 4.ರಾಮನಗರ, 5.ತುಮಕೂರು. ಜಿಲ್ಲೆಗಳಿಗೆ ನಿಗದಿಪಡಿಸಿರುತ್ತದೆ ಮತ್ತು ಇತರೆ ಜಿಲ್ಲೆಗಳಿಗೆ ರೂ.3.00 ಲಕ್ಷಗಳನ್ನು ನಿಗದಿಪಡಿಸಿರುತ್ತದೆ.

## 7. ಸಮುದಾಯ ಆಧಾರಿತ ತರಬೇತಿ ಯೋಜನೆ

- ನಿಗಮದ ವತಿಯಿಂದ ಅಲ್ಪಸಂಖ್ಯಾತ ಸಮುದಾಯದ ನಿರುದ್ಯೋಗ ಹೊಂದಿರುವ ಯುವಕ /ಯುವತಿಯರಿಗೆ ಸ್ವಂತ ಉದ್ಯೋಗ /ಕಛೇರಿ,ಕಂಪೆನಿ,ಕಾರ್ಖಾನೆಗಳಲ್ಲಿ ಉದ್ಯೋಗ ದೊರಕಿಸುವ ಸಲುವಾಗಿ ಈ ಕೆಳಗಿನ ತರಬೇತಿ ಯೋಜನೆಯನ್ನು ಹಮ್ಮಿಕೊಳ್ಳಲು ಪ್ರಸ್ತಾಪಿಸಲಾಗಿದೆ.
- ಮಾನ್ಯತೆ ಪಡೆದ ಕೇಂದ್ರಗಳೊಂದಿಗೆ ಬ್ಯೂಟಿ ಪಾರ್ಲರ್ ತರಬೇತಿ (ಪುರುಷರು ಮತ್ತು ಮಹಿಳೆಯರು)ಪ್ರಾಮಾಣೀಕರಣ ಕೋರ್ಸ್
  Beauty parlour training (men and woman) certification course with recognized centres
- ಶಾರ್ಟ್ ಹ್ಯಾಂಡ್ ಟ್ರೇನಿಂಗ್
  Short Hand Training
- ಭದ್ರತಾ ಸೇವೆಗಳ ತರಬೇತಿ
  Security Service Training
- ಕಛೇರಿ ಕಾರ್ಯ ನಿರ್ವಹಣಾ ತರಬೇತಿ
  Office Administrative Training
- ಡಿಜಿಟಲ್ ಮಾರ್ಕೆಟಿಂಗ್
  Digital Marketing.

## 8. ರೇಷ್ಮೆ ನೂಲು ಬಿಚ್ಚಾಣಿಕೆ ಉದ್ಯಮಕ್ಕೆ ಪ್ರೋತ್ಸಾಹ

ರೇಷ್ಮೆನೂಲು ಬಿಚ್ಚಾಣಿಕೆಯಲ್ಲಿ ತೊಡಗಿರುವ ಅಲ್ಪಸಂಖ್ಯಾತ ಫಲಾನುಭವಿಗಳನ್ನು ಪ್ರೋತ್ಸಾಹಿಸಿ ಅವರ ಆರ್ಥಿಕ ಸ್ಥಿತಿಯನ್ನು ಉತ್ತಮಪಡಿಸುವಸಲುವಾಗಿ ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ ಅಗತ್ಯವಿರುವ ದುಡಿಮೆ ಬಂಡವಾಳ (working capital) ಮತ್ತು ಮೂಲಭೂತ ಸೌಕರ್ಯವನ್ನು ಒದಗಿಸಲು ನಿಗಮದಿಂದ ರೂ.2.00ಲಕ್ಷದವರೆಗೆ ಸಾಲ ಸಹಾಯಧನ ಒದಗಿಸಲಾಗುವುದು. ಇದರಲ್ಲಿ ಶೇ.50 ಸಹಾಯಧನವಾಗಿರುತ್ತದೆ.

## 9. ಅಲ್ಪಸಂಖ್ಯಾತ ಸಮುದಾಯದ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆ

ಅಲ್ಪಸಂಖ್ಯಾತ ಸಮುದಾಯದ ಸ್ವ-ಸಹಾಯ ಗುಂಪುಗಳಿಗೆ ವಿವಿಧ ರೀತಿಯ ಸ್ವಯಂ ಉದ್ಯೋಗ ಚಟುವಟಿಕೆಯಲ್ಲಿ ತೊಡಗಿಸಿ ಅವರನ್ನು ಆರ್ಥಿಕ ಸ್ವಾಲಂಬಿಯನ್ನಾಗಿ ಮಾಡುವ ಸಲುವಾಗಿ, ರಾಷ್ಟ್ರೀಕೃತ/ಶೆಡ್ಯೂಲ್ ಬ್ಯಾಂಕ್/RBI ನಿಂದ ಮಾನ್ಯತೆ ಪಡೆದ ವಿವಿಧ ಆರ್ಥಿಕ ಸಂಸ್ಥೆಗಳಿಂದ ಪಡೆಯುವ ಸಾಲಕ್ಕೆ ಘಟಕವೆಚ್ಚದ ಶೇ.50 ಅಥವಾ ಗರಿಷ್ಠ ರೂ.2.00 ಲಕ್ಷ ಸಹಾಯಧನವನ್ನು ನಿಗಮದಿಂದ ಒದಗಿಸಲಾಗುವುದು.

(ಸಹಾಯಧನವು ಬ್ಯಾಕ್ಎಂಡ್ ಸಬ್ಸಿಡಿಯಾಗಿದ್ದು ಸ್ವಸಹಾಯ ಸಂಘಗಳು ಆರ್ಥಿಕ ಬ್ಯಾಂಕ್‌ಗಳಿಂದ ಪಡೆದ ಸಾಲದ ಮರುಪಾವತಿಗೆ ಹೊಂದಾಣಿಕೆ ಮಾಡಲಾಗುವುದು.)

## 10. ಸಿಖ್ಖ ಲಿಗಾರ ಸಮುದಾಯದ ಜನರ ಆರ್ಥಿಕ ಸಬಲೀಕರಣಕ್ಕೆ ಪ್ರೋತ್ಸಾಹ

ಸಿಖ್ಖಧರ್ಮದಲ್ಲಿರುವ ಸಿಖ್ಖಲಿಗಾರ ಸಮುದಾಯದ ಜನರು ಕರ್ನಾಟಕ ರಾಜ್ಯದ 12 ಜಿಲ್ಲೆಗಳಲ್ಲಿ ವಾಸಿಸುತ್ತಿದ್ದು ಆರ್ಥಿಕವಾಗಿ ಹಿಂದುಳಿದಿರುತ್ತಾರೆ. ಈ ಸಮುದಾಯದ ಹೆಚ್ಚಿನ ಕುಟುಂಬಗಳು Iron Ware ಕೆಲಸ Welding/Fabricators ಕೂಲಿ ಕೆಲಸವನ್ನು ನಿರ್ವಹಿಸುತ್ತಿದ್ದು ವಾರ್ಷಿಕ ಆದಾಯವು ರೂ.50,000 /- ರಿಂದ ರೂ.1,00,000 /-ಗಳಾಗಿರುತ್ತದೆ. ಸಿಖ್ಖ ಲಿಗಾರ ಸಮುದಾಯದ ಜನರನ್ನು ಆರ್ಥಿಕ ಸ್ವಾಲಂಬಿಗಳಗಾಗಿ ಮಾಡುವ ಸಲುವಾಗಿ ನಿಗಮದಿಂದ ಸ್ವಯಂ ಉದ್ಯೋಗ ಚಟುವಟಿಕೆ ಗಳನ್ನು ಕೈಗೆತ್ತಿಕೊಳ್ಳಲು ರೂ.50,000/- ಸಾಲ ಮತ್ತು ರೂ.50,000/- ಸಹಾಯಧನವನ್ನು ಮತ್ತು ಗೂಡ್ಸ್ ಟೆಂಪೂ / ವಾಹನ ಖರೀದಿಸಲು ವಾಹನ ಮೊತ್ತದ ಶೇ.33 ಗರಿಷ್ಠ ರೂ.1.50 ಲಕ್ಷ ಸಹಾಯಧನ ಒದಗಿಸಲಾಗುವುದು. ಒಂದು ವೇಳೆ ಸ್ವಯಂ ಉದ್ಯೋಗಕ್ಕೆ ಬ್ಯಾಂಕ್/ಆರ್ಥಿಕ ಸಂಸ್ಥೆಗಳಿಂದ ಸಾಲ ಪಡೆಯುವುದಾದಲ್ಲಿ ನಿಗಮದಿಂದ ಶೇ.33 ಗರಿಷ್ಠ ರೂ.1.00 ಲಕ್ಷ ಸಹಾಯಧನ ಒದಗಿಸಲಾಗುವುದು.

## 11. ವಿದೇಶಿ ವಿದ್ಯಾಭ್ಯಾಸ ಸಾಲ

ಅಲ್ಪಸಂಖ್ಯಾತ ಸಮುದಾಯಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ವ್ಯಾಸಂಗ ಮಾಡಲು ಆರ್ಥಿಕ/ಸಾಲ ನೆರವು ನೀಡುವುದು ಈ ಯೋಜನೆಯ ಉದ್ದೇಶವಾಗಿದೆ. ವಿದೇಶದಲ್ಲಿ 250 ರೊಳಗೆ Univercity Ranking ಹೊಂದಿರುವ ಪ್ರತಿಷ್ಠಿತ ವಿಶ್ವವಿದ್ಯಾನಿಲಯಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ವ್ಯಾಸಂಗ ಮಾಡಲು ಅನುಕೂಲವಾಗುವಂತೆ ಶೂನ್ಯ ಬಡ್ಡಿದರದಲ್ಲಿ ಪ್ರತಿ ವಿದ್ಯಾರ್ಥಿಗೆ ರೂ.20.00 ಲಕ್ಷಗಳು ಸಾಲ ಸೌಲಭ್ಯ ಒದಗಿಸಲಾಗುವುದು.

## 12. ವ್ಯಾಪಾರ ಉದ್ದಿಮೆ /ನೇರ ಸಾಲ ಯೋಜನೆ

ಈ ಯೋಜನೆಯಡಿಯಲ್ಲಿ ವ್ಯಾಪಾರ/ಉದ್ದಿಮೆ ಚಟುವಟಿಕೆ ಕೈಗೊಳ್ಳಲು ಬಯಸುವ ಫಲಾನುಭವಿಗಳಿಗೆ ಆಸ್ತಿಯ (ಕಟ್ಟಡ/ಭೂಮಿ) ಅಡಮಾನದ ಮೇಲೆ ಸಾಲವನ್ನು ಒದಗಿಸಲಾಗುವುದು

## 13. ಹೊಸದಾಗಿ ಸ್ಥಾಪಿಸಲ್ಪಡುವ ಹಾಗೂ ಈಗಾಗಲೇ ಅಸ್ತಿತ್ವದಲ್ಲಿರುವ ಉದ್ಯಮಗಳಿಗೆ ಬಡ್ಡಿ ಸಹಾಯಧನ ಯೋಜನೆ

ಈ ಯೋಜನೆಯಡಿ ರಾಜ್ಯದ ಅಲ್ಪಸಂಖ್ಯಾತರ ವರ್ಗಗಳ ಉದ್ದಿಮೆದಾರರಿಂದ ಸ್ಥಾಪಿಸಲ್ಪಡುವ ಹೊಸ ಹಾಗೂ ಈಗಾಗಲೆ ಅಸಿತ್ವದಲ್ಲಿರುವ ಸೂಕ್ಷ್ಮಹಾಗೂ ಸಣ್ಣ ಉದ್ಯಮಗಳಿಗೆ ವಾರ್ಷಿಕ ರೂ.6% ಬಡ್ಡಿ ಸಹಾಯಧನ ಯೋಜನೆಯನ್ನು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ(ಕೆಎಸ್ ಎಫ್ ಸಿ ) ಮೂಲಕ ಅನುಷ್ಠಾನಗೊಳಿಸಲಾಗುವುದು ಕೆಎಸ್ ಎಫ್ ಸಿಕಾಲಕಾಲಕ್ಕೆ ಗುರುತಿಸಿದ/ನವೀಕರಿಸಿದ ಕೈಗಾರಿಕಾ ಚಟುವಟಿಕೆಗಳಿಗೆ ಮಾತ್ರ ಈ ಯೋಜನೆಯಡಿಯಲ್ಲಿ ಸಾಲದ ನೆರವು ಪಡೆಯಲು ಅರ್ಹವಿರುತ್ತದೆ.

ಅನುಬಂಧ-'8'

ಅನುಬಂಧ-2

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24 ನೇ ಸಾಲಿನ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಸಕಇ 245 ಜಿಎಂಎಸ್ 2004, ದಿನಾಂಕ:27.04.2005 ಹಾಗೂ 12.10.2006
2. ಸರ್ಕಾರದ ಆದೇಶ ಸಂಖ್ಯೆ:MWD 80 MDC 2014, ದಿ:28.02.2015.
3. ಸರ್ಕಾರದ ಆದೇಶ ಸಂಖ್ಯೆ:MWD 60 MDC 2016, ದಿ:27.10.2016.
4. ಸರ್ಕಾರದ ಆದೇಶ ಸಂಖ್ಯೆ:MWD 55 MDC 2017, ದಿ:19.05.2017.
5. ಸರ್ಕಾರದ ಆದೇಶ ಸಂಖ್ಯೆ:MWD 29 MDC 2020, ದಿ:27.08.2020.
6. ಸರ್ಕಾರದ ಆದೇಶ ಸಂಖ್ಯೆ:MWD 61 MDC 2021, ದಿ:29.09.2021.
7. ಸರ್ಕಾರದ ಆದೇಶ ಸಂಖ್ಯೆ:MWD 50 MDC 2021, ದಿ:09.08.2021.
8. ಸರ್ಕಾರದ ಆದೇಶ ಸಂಖ್ಯೆ:MWD 61 MDC 2021, ದಿ:15.11.2010 ಮತ್ತು 02.12.2022.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರ ಏಕ ಕಡತ ಸಂಖ್ಯೆ:ಕಅಅನಿ/ಕ್ರಿಯಾ ಯೋಜನೆ/2023-24.

ಪ್ರಸ್ತಾವನೆ,

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಿಂದ (8) ರವರೆಗಿನ ಸರ್ಕಾರದ ಆದೇಶಗಳಲ್ಲಿ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ವಿವಿಧ ಸಾಲ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ(9) ರಲ್ಲಿನ ಏಕ ಕಡತದಲ್ಲಿ 2023-24 ನೇ ಸಾಲಿನ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

K M D C LTD.
Head Office, Bangalore
25 SEP 2023
No. 317

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 70 MDC 2023, ಬೆಂಗಳೂರು**

**ದಿನಾಂಕ:22.09.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2023-24 ನೇ ಸಾಲಿಗೆ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ

...2

ಈ ಸಮುದಾಯಗಳಿಗೆ ಜಾರಿಯಲ್ಲಿರುವ ಯೋಜನೆಗಳಿಗೆ ಈ ಕೆಳಕಂಡಂತೆ ಅರ್ಹತಾ ಮಾನದಂಡಗಳನ್ನು, ಪರಿಷ್ಕರಿಸಿ ಸಮುದಾಯಗಳಿಗೆ ಸಹ ಅನ್ವಯವಾಗುವಂತೆ ನೀಡಲಾಗಿದೆ.

| ಕ್ರ.ಸಂ. | ಯೋಜನೆಯ ಹೆಸರು | ಹಿಂದಿನ ಮಾನದಂಡಗಳು | ಪರಿಷ್ಕೃತ ಮಾನದಂಡಗಳು |
|---|---|---|---|
| 1 | ಸ್ವಾವಲಂಬಿ ಸಾರಥಿ ಯೋಜನೆ/ಪ್ಯಾಸೆಂಜರ್ ಆಟೋರಿಕ್ಷಾ/ಟ್ಯಾಕ್ಸಿ/ಗೂಡ್ಸ್ ವಾಹನ ಖರೀದಿಸಲು ಸಹಾಯಧನ ಯೋಜನೆ) | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.4.50 ಲಕ್ಷ ಮೀರಬಾರದು | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| | | | ನಗರ ಪ್ರದೇಶದಲ್ಲಿನ ಪ್ಯಾಸೆಂಜರ್ ಆಟೋರಿಕ್ಷಾಗಳಿಗೆ permit ಕಡ್ಡಾಯಗೊಳಿಸಲಾಗಿದೆ. |
| 2 | ಸ್ವಯಂ ಉದ್ಯೋಗ ಯೋಜನೆ | 1)ಕುಟುಂಬದ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದ ರೂ.81,000/- ನಗರ ಪ್ರದೇಶ ರೂ.1,03,000/- ಮೀರಬಾರದು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| | | 2)ರಾಷ್ಟ್ರೀಕೃತ /ಷೆಡ್ಯೂಲ್ ಬ್ಯಾಂಕ್‌ಗಳ ಸಹಯೋಗದೊಂದಿಗೆ ಸಾಲ ಮತ್ತು ಸಹಾಯಧನ ಒದಗಿಸಲಾಗುವುದು. | ರಾಷ್ಟ್ರೀಕೃತ ಬ್ಯಾಂಕುಗಳು/ಷೆಡ್ಯೂಲ್ ಬ್ಯಾಂಕ್/Co-operative Banks/Co-operative Societies /Private ಬ್ಯಾಂಕ್‌ಗಳಿಂದ ಪಡೆಯುವ ಸಾಲ ಮೊತ್ತದ ಶೇ.33 ರಷ್ಟು ಅಥವಾ ಗರಿಷ್ಠ ಒಂದು ಲಕ್ಷ ರೂ.ವರೆಗೆ ಸಹಾಯಧನವನ್ನು ನೀಡಲಾಗುವುದು. |
| 3 | ವೃತ್ತಿ ಪ್ರೋತ್ಸಾಹ ಯೋಜನೆ | 1) ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ ಮಿತಿಯ ರೂ.1,03,000/ (ನಗರ ಪ್ರದೇಶ) ಮತ್ತು ರೂ.81,000/- (ಗ್ರಾಮೀಣ ಪ್ರದೇಶ) ಮೀರಿರಬಾರದು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| | | 2) ಫಲಾನುಭವಿಗಳ ಆಯ್ಕೆ ಸಮಿತಿಯ ಅಧ್ಯಕ್ಷರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು | ಆಯ್ಕೆ ಸಮಿತಿಯ ಅಧ್ಯಕ್ಷರು ವಿಧಾನ ಸಭಾ ಕ್ಷೇತ್ರದ ಮಾನ್ಯ ಶಾಸಕರು ಹಾಗೂ ನೋಡಲ್ ತಾಲ್ಲೂಕುಗಳಾಗಿ ಆಯ್ಕೆ ಮಾಡಿಕೊಂಡಿರುವ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಸಹ ಅಧ್ಯಕ್ಷರು. |

......3

| | | | |
|---|---|---|---|
| 4 | ಶ್ರಮಶಕ್ತಿ ಯೋಜನೆ | ಎಲ್ಲಾ ಮೂಲಗಳಿಂದ ಕೌಟುಂಬಿಕ ವಾರ್ಷಿಕ ಆದಾಯ ರೂ.3.50 ಲಕ್ಷದೊಳಗಿರಬೇಕು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| 5 | ಶ್ರಮಶಕ್ತಿ (ವಿಶೇಷ ಮಹಿಳಾ) ಯೋಜನೆ | ಎಲ್ಲಾ ಮೂಲಗಳಿಂದ ಕೌಟುಂಬಿಕ ವಾರ್ಷಿಕ ಆದಾಯ ರೂ.3.50 ಲಕ್ಷದೊಳಗಿರಬೇಕು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| | | ಅರ್ಜಿದಾರರು ವಯೋಮಿತಿ 18 ರಿಂದ 55 ವರ್ಷಗಳು | ಅವಿವಾಹಿತ ಮಹಿಳೆಯರು 40-55 ವರ್ಷದೊಳಗಿರಬೇಕು. ವಿಧವೆ/ವಿಚ್ಛೇದಿತ ಮಹಿಳೆಯರು 18 ರಿಂದ 55 ವರ್ಷಗಳು. |
| 6 | ಸಮುದಾಯ ಆಧಾರಿತ ತರಬೇತಿ ಯೋಜನೆ | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.1,03,000/- ನಗರ ಪ್ರದೇಶಗಳಿಗೆ ರೂ.96,000/- ಗ್ರಾಮಾಂತರ ಪ್ರದೇಶಗಳಿಗೆ ಮೀರಬಾರದು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು. |
| | | | Office Soft Skill ಮತ್ತು Retail Marketing ತರಬೇತಿ ಸೇರಿಸಿ ಒದಿಕೊಳ್ಳತಕ್ಕದ್ದು. |
| | | ಫಲಾನುಭವಿಗಳ ಆಯ್ಕೆ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿರುವ ಸಮಿತಿಯಿಂದ ಆಗಬೇಕು | ಆಯ್ಕೆ ಸಮಿತಿಯನ್ನು ತೆಗೆದುಹಾಕಲಾಗಿದೆ. |
| 7 | ಗಂಗಾ ಕಲ್ಯಾಣ ಯೋಜನೆ | 1) ಅರ್ಜಿದಾರರ ವಯೋಮಿತಿ 18 ರಿಂದ 55 ವರ್ಷಗಳು | ಅರ್ಜಿದಾರ ವಯಸ್ಸು ಕನಿಷ್ಠ 18 ವರ್ಷ ಇರಬೇಕು. ಅರ್ಜಿದಾರರ ಗರಿಷ್ಠ ವಯೋಮಿತಿ 55 ವರ್ಷ ಇರುವುದನ್ನು ರದ್ದುಪಡಿಸಲಾಗಿದೆ. |
| | | 2) ಎಲ್ಲಾ ಮೂಲಗಳಿಂದ ವಾರ್ಷಿಕ ಆದಾಯ ರೂ.96,000/- | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00ಲಕ್ಷ ಮೀರಬಾರದು. |
| 8 | NMDFC Term Loan, Micro Finance loan, Virasat ಯೋಜನೆ. | ಫಲಾನುಭವಿಗಳ ಆಯ್ಕೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯ ಸಮಿತಿಯಿಂದ ಮಾಡುವುದು. | ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯು ತೆಗೆದು ಹಾಕಲಾಗಿದೆ ರಾಜ್ಯಮಟ್ಟದ ಆಯ್ಕೆ ಸಮಿತಿ ಫಲಾನುಭವಿಗಳ ಆಯ್ಕೆ ಮಾಡುವುದು. |

......4

ಇದಕ್ಕೆ ತಗಲುವ ವೆಚ್ಚವನ್ನು ಆಯಾ ಆರ್ಥಿಕ ವರ್ಷದಲ್ಲಿ ಈ ಯೋಜನೆಗಳಿಗೆ ನಿಗದಿಪಡಿಸಲಾಗುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು, ಹಾಗೂ ಫಲಾನುಭವಿ ಆಯ್ಕೆಯನ್ನು ಸದರಿ ಅನುದಾನದ ಮಿತಿಯಲ್ಲಿಯೇ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/9/2023

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ.

ಗೆ:

1. ಪ್ರಧಾನ ಮಹಾಲೇಖಪಾಲರು (ಅ ಮತ್ತು ಇ) (ಲೆಕ್ಕ ಪರಿಶೋಧನೆ-1 & 2) ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಕೆ.ಎಂ.ಡಿ.ಸಿ. ಭವನ, ಶೇಷಾದ್ರಿಪುರಂ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು. (ಕೆ.ಎಂ.ಡಿ.ಸಿ. ಮುಖಾಂತರ).
4. ಎಲ್ಲಾ ಜಿಲ್ಲೆಯ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು(ಕೆ.ಎಂ.ಡಿ.ಸಿ. ಮುಖಾಂತರ).
5. ಎಲ್ಲಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು. (ಕೆ.ಎಂ.ಡಿ.ಸಿ. ಮುಖಾಂತರ).
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸಮನ್ವಯ ಅಧಿಕಾರಿ, ಸಹಾಯವಾಣಿ ಕೇಂದ್ರ (24x7), ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.